# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಆಯುಕ್ತರ ಕಛೇರಿ, ನರಸಿಂಹರಾಜ ಚೌಕ, ಬೆಂಗಳೂರು-560002
ದೂರವಾಣಿ: 080-22237455/22221286, ಇ-ಮೇಲ್: comm@bbmp.gov.in

ಸಂಖ್ಯೆ: ಬಿಬಿಎಂಪಿ/ಮುಆ/ಪಿಎಸ್‌ಆರ್/43/2021-22. ಮೇ 03, 2021

## ಕಛೇರಿ ಆದೇಶ

ರವರಿಗೆ,

ಎಲ್ಲಾ ವಲಯ ಆಯುಕ್ತರುಗಳು/
ಎಲ್ಲಾ ಜಂಟಿ ಆಯುಕ್ತರು

ಮಾನ್ಯರೇ,

**ವಿಷಯ**: ಕೋವಿಡ್ ಆರೈಕೆ ಕೇಂದ್ರಗಳಲ್ಲಿ ಆಕ್ಸಿಜನ್ ಸಹಿತ ಬೆಡ್‌ಗಳನ್ನು ಸ್ಥಾಪಿಸುವ ಬಗ್ಗೆ.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೋವಿಡ್-19ರ ಪ್ರಕರಣಗಳ ಸಂಖ್ಯೆ ಹಾಗೂ ಕೋವಿಡ್ ಸೋಂಕು ದೃಢಪಡುತ್ತಿರುವ ಪ್ರಮಾಣವು ಹೆಚ್ಚಾಗಿರುತ್ತದೆ. ಈ ಮೇರೆಗೆ ಪಾಲಿಕೆ ವ್ಯಾಪ್ತಿಯಲ್ಲಿ ಅಲ್ಪ ಮತ್ತು ಮಧ್ಯಮ ಪ್ರಮಾಣದ ಲಕ್ಷಣಗಳುಳ್ಳ ಸೋಂಕಿತರ ಚಿಕಿತ್ಸೆಗಾಗಿ ಕೋವಿಡ್ ಆರೈಕೆ ಕೇಂದ್ರಗಳನ್ನು ಸ್ಥಾಪಿಸಿ ನಿರ್ವಹಿಸಲಾಗುತ್ತಿರುತ್ತದೆ.

ಮುಂದುವರೆದು, ಕೋವಿಡ್-19 ಸೋಂಕಿತರ ಚಿಕಿತ್ಸೆಗಾಗಿ ಆಕ್ಸಿಜನ್‌ಯುಕ್ತ ಬೆಡ್‌ಗಳ ಅವಶ್ಯಕತೆ ಹೆಚ್ಚಾಗಿರುವುದರಿಂದ ಈಗಾಗಲೇ ಸ್ಥಾಪಿಸಲಾಗಿರುವ ಹಾಗೂ ಮುಂದಿನ ದಿನಗಳಲ್ಲಿ ಸ್ಥಾಪಿಸಲಾಗುವ ಕೋವಿಡ್ ಆರೈಕೆ ಕೇಂದ್ರಗಳಲ್ಲಿ ಆಕ್ಸಿಜನ್‌ಯುಕ್ತ ಬೆಡ್‌ಗಳ ಸ್ಥಾಪನೆ ಅವಶ್ಯಕವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಪಾಲಿಕೆ ವ್ಯಾಪ್ತಿಯಲ್ಲಿ ಈಗಾಗಲೇ ಸ್ಥಾಪಿಸಲಾಗಿರುವ ಕೋವಿಡ್ ಆರೈಕೆ ಕೇಂದ್ರಗಳಲ್ಲಿನ ಬೆಡ್‌ಗಳ ಪೈಕಿ ಕನಿಷ್ಠ ಶೇ.20 ರಷ್ಟನ್ನು ಆಕ್ಸಿಜನ್ ಸಹಿತ ಬೆಡ್‌ಗಳನ್ನಾಗಿ ಪರಿವರ್ತಿಸಲು ಹಾಗೂ ಮುಂದಿನ ದಿನಗಳಲ್ಲಿ ಸ್ಥಾಪಿಸಲಾಗುವ ಎಲ್ಲಾ ಕೋವಿಡ್ ಆರೈಕೆ ಕೇಂದ್ರಗಳಲ್ಲಿ ಕನಿಷ್ಠ ಶೇ.20 ರಷ್ಟು ಬೆಡ್‌ಗಳನ್ನು ಆಕ್ಸಿಜನ್ ಸಹಿತ ಬೆಡ್‌ಗಳನ್ನಾಗಿ ಸ್ಥಾಪಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಈ ಮೂಲಕ ಸೂಚಿಸಿದೆ.

(ಗೌರವ ಗುಪ್ತ)
ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ